Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಯಪ/ಕೊಉ/ಪಿಆರ್/03/2020-21

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 01.10.2021

**ದಿನಾಂಕ: 01.10.2021 ರಂದು ನಡೆದ ವಾರ್ಡ್ ಸಂ.08 ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀ. ಮಂಜುನಾಥ್, ಹಿರಿಯ ಆರೋಗ್ಯ ಪರಿವೀಕ್ಷಕರು, ಅರೋಗ್ಯ
- ಶ್ರೀಮತಿ ಕವಿತ, ಕಿರಿಯ ಆರೋಗ್ಯ ಪರೀವಿಕ್ಷಕರು, ಆರೋಗ್ಯ
- ಶ್ರೀ ಬಾಬುರೆಡ್ಡಿ ಕೆ.ಎನ್, ಕಿರಿಯ ಅಭಿಯಂತರರು (ವಿದ್ಯುತ್ ವಿಭಾಗ), ಬಿಬಿಎಂಪಿ
- ಶ್ರೀ ಬಲಪ್ಪ, ಪೊಲೀಸ್ ಸಬ್ ಇನ್ಸಪೆಕ್ಟರ್, ಕೊಡಿಗೇಹಳ್ಳಿ ಪೊಲೀಸ್ ಠಾಣೆ
- ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (**BWSSB**).

**<u>ವಾರ್ಡ್ ಸಮಿತಿ ಸದಸ್ಯರು</u>**

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು
- ಶ್ರೀ. ಅಂತೋನಿ ದಾಸ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
- ಶ್ರೀ ವೀರಣ್ಣ, ಎಲ್.ಕೆ.ಆರ್ ಬಡಾವಣೆ, ಕಾರ್ಯದರ್ಶಿ, ವಸತಿ ಕ್ಷೇಮಾಭಿವೃದ್ಧಿ ಸಂಘ
- ಶ್ರೀಮತಿ ಜ್ಯೋತಿ ಎಸ್. ಆಚಾರ್ಯ, ಹಿರನಂದಾನಿ ವಸತಿ ಕ್ಷೇಮಾಭಿವೃದ್ಧಿ ಸಂಘ

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ

5. ಸಹಾಯಕ ಕಾರ್ಯಪಾಲಕ ಅಭಿಯಂತರರು
ಕಳುಹಿಸಿದೆ.

6. ಸಹಾಗ...

ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ನೋಡಲ್ ಅಧಿಕಾರಿ ರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ ಮತ್ತು ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು.

1. ಘನತ್ಯಾಜ್ಯ ನಿರ್ವಹಣೆ:
   1. ಆರ್ಮ್ಕೋ ಬಡಾವಣೆಯಲ್ಲಿರುವ ಜಗನ್ನಾಥ್ ದೇವಸ್ಥಾನದ ಎದುರು ಕಸದ ರಾಶಿ ಕಂಡುಬಂದಿದ್ದು, ಸುತ್ತಮುತ್ತಲಿನ ಪ್ರದೇಶದಲ್ಲಿ ದುರ್ವಾಸನೆಯಿಂದ ದೇವಸ್ಥಾನಕ್ಕೆ ಹೋಗುವ ಭಕ್ತಾದಿಗಳಿಗೆ ಹಾಗೂ ರಸ್ತೆಯಲ್ಲಿ ಓಡಾಡುವ ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿದೆ ಎಂದು ಸಭೆಗೆ ತಿಳಿಸಿದರು.
   2. ಟಾಟಾನಗರದ ಮುಖ್ಯರಸ್ತೆಯಲ್ಲಿ ಬ್ಲಾಕ್‌ಸ್ಪಾಟ್ ತೆರವುಗೊಳಿಸಲು ಕ್ರಮ ತೆಗೆದುಕೊಳ್ಳುವಂತೆ ಸಭೆಗೆ ತಿಳಿಸಿದರು.

2. ಆರೋಗ್ಯ ಇಲಾಖೆ:
   1. ಕೋವಿಡ್ 3ನೇ ಅಲೆ ಹರಡುವ ಸಾಧ್ಯತೆಯಿದ್ದು, ಕೋವಿಡ್ ಸೋಂಕಿನ ಬಗ್ಗೆ ಎಚ್ಚರವಹಿಸಲು ಅಧಿಕಾರಿಗಳು ಸಮಿತಿ ಸದಸ್ಯರಿಗೆ ಮನದಟ್ಟು ಮಾಡಿರುತ್ತಾರೆ.
   2. ವಸತಿ ಸಮುಚ್ಚಯಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಪರಿಶೀಲಿಸಲು ನಿಯಮಿತ ತಪಾಸಣೆಯನ್ನು ಕೈಗೊಳ್ಳುವುದು.
   3. ಅಂಗಡಿಗಳ ಮಾಲೀಕರು ವ್ಯಾಪಾರ ಪರವಾನಿಗೆಯನ್ನು ಪಡೆಯದೇ ವ್ಯಾಪಾರ ಮಾಡುತ್ತಿರುವುವರ ವಿರುದ್ಧ ಕ್ರಮಕೈಗೊಳ್ಳುವುದು.
   4. ಸಹಕಾರನಗರದ ಹಾಪ್‌ಕಾಮ್ಸ್ ಅಂಗಡಿಯ ವಸ್ತುಗಳನ್ನು ಫುಟ್‌ಪಾತ್ ಒತ್ತುವರಿ ಮಾಡಿಕೊಂಡು ವ್ಯಾಪಾರ ನಡೆಸುತ್ತಿರುವುದು ಕಂಡುಬಂದಿದ್ದು, ಮಾಲೀಕರಿಗೆ ನೋಟಿಸ್ ಕೊಡಲು ಕ್ರಮವಹಿಸುವುದು.
   5. ಹೊರ ರಾಜ್ಯಗಳಿಂದ ಬರುವ ಪ್ರಯಾಣಿಕರು ಕಂಡುಬಂದಲ್ಲಿ ಸುತ್ತಮುತ್ತಲಿನ ಜನರು ಆರೋಗ್ಯ ಇಲಾಖೆಯವರಿಗೆ ಮಾಹಿತಿ ಕೊಡಬೇಕೆಂದು, ಅವರಿಗೆ ಕೋವಿಡ್ ಪರೀಕ್ಷೆ ನಡೆಸಲು ಕ್ರಮವಹಿಸಬೇಕೆಂದು ಸಭೆಗೆ ತಿಳಿಸಿದರು.

3. ಕಾಮಗಾರಿ ವಿಭಾಗ:
   1. ಎಲ್.ಕೆ.ಆರ್ ನಗರದಲ್ಲಿ ಸಿಸಿಟಿವಿ ಸಮಸ್ಯೆಯನ್ನು ಸರಿ ಪಡಿಸಲು ಕ್ರಮವಹಿಸುವುದು.

4. ವಿದ್ಯುತ್ (ಬೀದಿ ದೀಪಗಳ ನಿರ್ವಹಣೆ) ವಿಭಾಗ:

1. ಬೀದಿ ದೀಪಗಳ ನಿರ್ವಹಣೆ ಅತ್ಯಂತ ಪ್ರಮುಖವಾದ ಕೆಲಸವಾಗಿದ್ದು, ಬೀದಿ ದೀಪಗಳನ್ನು ಆದಷ್ಟು ಸುಸ್ಥಿತಿಯಲ್ಲಿಡುವುದು.
2. ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಲಾಗಿರುವ ಎಲ್.ಇ.ಡಿ ವಿದ್ಯುತ್ ದೀಪಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವುದರ ಬಗ್ಗೆ ಕ್ರಮವಹಿಸುವುದು.
3. ಬೀದಿ ದೀಪಗಳ ಸಮಸ್ಯೆ ಇದ್ದಲ್ಲಿ ಅದನ್ನು ವಾರ್ಡ್ ಸಮಿತಿಯ ವಾಟ್ಸ್ಆಪ್ ಗ್ರೂಪ್‌ನಲ್ಲಿ ತಿಳಿಸುವುದು. ಇದರ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮವಹಿಸುವುದು.

ಅಂತಿಮವಾಗಿ ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

(ಪ್ರವೀಣ್ ಎ.ಆರ್.)
ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

ಪ್ರತಿಯನ್ನು:-

1. ಮಾನ್ಯ ಆಡಳಿತ ಅಧಿಕಾರಿಗಳು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹ'ತ್ ನೀರುಗಾಲುವೆ ರವರ ಮಾಹಿತಿಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
11. ಕಛೇರಿ ಕಡತಕ್ಕೆ.